RNU AIR DHARWAD

**AUGUST 8, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- 'ಬ್ರಿಟಿಷರೇ ಭಾರತ ಬಿಟ್ಟು ತೊಲಗಿ'–ಕ್ವಿಟ್ ಇಂಡಿಯಾ ಆಂದೋಲನದ, 82ನೇ ವರ್ಷಾಚರಣೆ, ಇಂದು.
- ರಾಜ್ಯದ ಜನಸಾಮಾನ್ಯರ ಹಿತಕಾಯುವಲ್ಲಿ ಸರ್ಕಾರ ಬದ್ಧತೆ ತೋರಿದೆ– ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ.
- ದೇಶ ಅಭಿವೃದ್ಧಿ ಪಥದಲ್ಲಿ ಸಾಗಲು ಶಿಕ್ಷಣ ಪ್ರಮುಖ ಅಸ್ತ್ರ–ರಾಜ್ಯಪಾಲ ಥಾವರಚಂದ ಗೆಹ್ಲೋಟ್
- ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ನಿನ್ನೆ ರಾಜ್ಯಾದ್ಯಂತ ರಾಷ್ಟ್ರೀಯ ಕೈಮಗ್ಗ ದಿನ ಆಚರಣೆ.

ಈಗ ವಾರ್ತೆಗಳ ವಿವರ

*******

'ಬ್ರಿಟಿಷರೇ ಭಾರತ ಬಿಟ್ಟು ತೊಲಗಿ'–ಕ್ವಿಟ್ ಇಂಡಿಯಾ ಆಂದೋಲನವನ್ನು, ಮುಂಬೈಯ ಅಖಿಲ ಭಾರತೀಯ ಕಾಂಗ್ರೆಸ್ ಅಧಿವೇಶನದಲ್ಲಿ, ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರು ಘೋಷಿಸಿದ ದಿನ, ಇಂದು.

'ಮಾಡು ಇಲ್ಲವೇ ಮಡಿ', ಎಂಬ ಘೋಷಣೆಯೊಂದಿಗೆ, ಆರಂಭವಾದ ನಿರ್ಣಾಯಕ ಹೋರಾಟದಲ್ಲಿ, ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲೂಕಿನ, ಈಸೂರು ಗ್ರಾಮದ ಜನ, "ಏಸೂರು ಕೊಟ್ಟರೂ, ಈಸೂರು ಕೊಡೆವು" ಎಂದು ಸ್ವಾತಂತ್ರ್ಯ ಘೋಷಿಸಿಕೊಂಡು, ಬ್ರಿಟಿಷರೊಂದಿಗೆ ಹೋರಾಡಿ ವೀರ ಮರಣವನ್ನಪ್ಪಿದರು.

ಗ್ರಾಮದ ಮಕ್ಕಳಾದ ಸಾಹುಕಾರ ಜಯಣ್ಣ ಅಮಲ್ದಾರರಾಗಿ ಹಾಗೂ ಕೆ.ಜಿ.ಮಲ್ಲಯ್ಯ ಅವರನ್ನು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆಗಿ ನೇಮಕ ಮಾಡಿಕೊಂಡು, ಜನ, ಈಸೂರಿಗೆ ಸ್ವಂತ ಸರ್ಕಾರವನ್ನು ಘೋಷಿಸಿಕೊಂಡರು.

'ಬೇಜವಾಬ್ದಾರಿ ಬ್ರಿಟಿಷ್ ಅಧಿಕಾರಿಗಳಿಗೆ ಈಸೂರಿಗೆ ಪ್ರವೇಶವಿಲ್ಲ ಎಂಬ ಎಚ್ಚರಿಕೆ ಫಲಕ'ವನ್ನು ಹಾಕಿ, ದೇಶಾಭಿಮಾನ ಮೆರೆದವರು ಈಸೂರಿನ ಜನ. ಈ ಪ್ರಕರಣದಲ್ಲಿ ಬ್ರಿಟಿಷ್ ಸರ್ಕಾರ 11 ಜನರಿಗೆ ಮರಣ ದಂಡನೆ, 13 ಮಂದಿಗೆ ಜೀವಾವಧಿ ಶಿಕ್ಷೆ ವಿಧಿಸಿತು.

'ಕ್ವಿಟ್ ಇಂಡಿಯಾ' ದಿನಾಚರಣೆ ಸ್ಮರಣಾರ್ಥ, ನಾಳೆ ಶುಕ್ರವಾರ, ಶಿಕಾರಿಪುರ ಪಟ್ಟಣದ ತಾಲೂಕು ಕಚೇರಿ ಮುಂಭಾಗದಲ್ಲಿರುವ, ಸ್ವಾತಂತ್ರ್ಯ ಹೋರಾಟಗಾರರ ಶಿಲಾ ಸ್ಮಾರಕಕ್ಕೆ, ತಾಲೂಕು ಆಡಳಿತ ಗೌರವಾರ್ಪಣೆ ಕಾರ್ಯಕ್ರಮ ಆಯೋಜಿಸಿದೆ.

*******

ಏಳನೇ ವೇತನ ಆಯೋಗದ ಅನುಷ್ಠಾನ ಸೇರಿದಂತೆ, ಐದು ಜನಪ್ರಿಯ ಗ್ಯಾರಂಟಿ ಯೋಜನೆಗಳನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಿ, ರಾಜ್ಯದ ಜನಸಾಮಾನ್ಯರ ಹಿತಕಾಯುವಲ್ಲಿ ಸರ್ಕಾರ ಬದ್ಧತೆ ದರ್ಶಿಸಿದೆ ಎಂದು ರಾಜ್ಯ ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಶಿವಮೊಗ್ಗ ಜಿಲ್ಲಾ ಪಂಚಾಯಿತಿ ಆವರಣದಲ್ಲಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ, ಜಿಲ್ಲಾ ಘಟಕ ಉದ್ಘಾಟನೆಗೆ ಮುನ್ನ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಖಾಸಗಿ ಶಾಲೆಗಳ ಬೇಕು-ಬೇಡಗಳನ್ನು ಸರ್ಕಾರದ ವತಿಯಿಂದ ಚರ್ಚಿಸಲು ಇಂದು ಬೆಂಗಳೂರಿನಲ್ಲಿ ಸಭೆ ಆಯೋಜಿಸಲಾಗಿದೆ. ಮುಖ್ಯಮಂತ್ರಿಗಳು ಸಮಾಲೋಚಿಸಿ, ನಿರ್ಣಯಿಸಲಿದ್ದಾರೆ ಎಂದರು.

*******

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ವೈದ್ಯಕೀಯ ಶಿಕ್ಷಣ ಇಲಾಖೆಯ, 'ಎ' ವೃಂದದ 650 ಸಹಾಯಕ ಪ್ರಾಧ್ಯಾಪಕರು ಮತ್ತು ಸಾವಿರದ ಇನ್ನೂರು ಶುಶ್ರೂಷಕರನ್ನು ನೇಮಕ ಮಾಡಿಕೊಳ್ಳಲು, ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಶರಣ ಪ್ರಕಾಶ ಪಾಟೀಲ ಆದೇಶಿಸಿದ್ದಾರೆ.

ವಿಕಾಸಸೌಧದಲ್ಲಿ ನಡೆದ, ವೈದ್ಯಕೀಯ ಶಿಕ್ಷಣ ಇಲಾಖೆಯ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳಲು ಉದ್ದೇಶಿಸಲಾಗಿದೆ. ರಾಜ್ಯದಲ್ಲಿ 22 ವೈದ್ಯಕೀಯ ಕಾಲೇಜುಗಳಿದ್ದು, 11 ಸೂಪರ್ ಸ್ಪೆ ಾಲಿಟಿ ಆಸ್ಪತ್ರೆಗಳಲ್ಲಿ ಸಹ ನಿಯಮದಂತೆ ಹುದ್ದೆಗಳ ನೇಮಕವಾಗಬೇಕು ಎಂದು ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

*******

ಆರೋಗ್ಯ ಸೇವೆಗಳು ಎಲ್ಲರ ಕೈಗೆಟುಕುವಂತಾಗಲು ಕೇಂದ್ರ ಸರ್ಕಾರ ತಕ್ಷಣ ಶೇಕಡಾ 18 ರಷ್ಟಿರುವ ಆರೋಗ್ಯ ವಿಮೆಯ ಮೇಲಿನ ಜಿಎಸ್‌ಟಿ ರದ್ದುಗೊಳಿಸಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಒತ್ತಾಯಿಸಿದ್ದಾರೆ.

ಜೀವ ವಿಮೆ, ಆರೋಗ್ಯ ವಿಮೆಗಳ ಮೇಲೆ ಶೇಕಡ 18 ರಷ್ಟು ಜಿಎಸ್‌ಟಿ ಹೇರಿಕೆ ಬಡ, ಮಧ್ಯಮವರ್ಗದ ಜನತೆಗೆ ಆರ್ಥಿಕ ಹೊರೆ ಸೃಷ್ಟಿಸಿದ್ದು, ಆರೋಗ್ಯ ಸೇವೆಗಳು ಕೈಗೆಟುಕದಂತಾಗಿವೆ ಎಂದಿದ್ದಾರೆ.

2047ರ ಒಳಗಾಗಿ 'ಎಲ್ಲರಿಗೂ ಆರೋಗ್ಯ ವಿಮೆ' ನೀಡುವುದಾಗಿ ಕೇಂದ್ರ ಸರ್ಕಾರ ಭರವಸೆ ನೀಡಿದ್ದು, ಒಂದು ಕೈಯಲ್ಲಿ ಕೊಟ್ಟು ಇನ್ನೊಂದು ಕೈಯಿಂದ ಕಿತ್ತುಕೊಳ್ಳುವ ನೀತಿ ಅನುಸರಿಸುತ್ತಿದೆ ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟೀಕಿಸಿದ್ದಾರೆ.

*******

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಜೆಡಿಎಸ್ ಜಂಟಿಯಾಗಿ ನಡೆಸುತ್ತಿರುವ ಪಾದಯಾತ್ರೆ ಮುಂದುವರಿದಿದ್ದು, ನಿನ್ನೆ ಮಂಡ್ಯ ನಗರ ಪ್ರವೇಶಿಸಿತು.

ಪಾದಯಾತ್ರೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಪರಿ ‘ತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಎರಡು ಪಕ್ಷದ ಶಾಸಕರು ಹಾಗೂ ಮುಖಂಡರು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಹಗರಣದಲ್ಲಿ ಮುಖ್ಯಮಂತ್ರಿಗಳ ಪಾತ್ರವಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. ಈ ನಿಟ್ಟಿನಲ್ಲಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

*******

ಪ್ರಧಾನಮಂತ್ರಿ ಕುಸುಮ್ ಯೋಜನೆಯಡಿ ಸೋಲಾರ್ ಪಂಪ್‌ಸೆಟ್ ಅಳವಡಿಕೆಗೆ ಕರ್ನಾಟಕದಿಂದಲೇ 1.79 ಲಕ್ಷ ರೈತರು ಬೇಡಿಕೆ ಇಟ್ಟಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಲೋಕಸಭೆಯಲ್ಲಿ ನಿನ್ನೆ ಈ ಕುರಿತು ಪ್ರಸ್ತಾಪಿಸಿದ ಅವರು, ಕರ್ನಾಟಕದಿಂದ ಬರೋಬ್ಬರಿ 1 ಲಕ್ಷ 79 ಸಾವಿರದ 588 ಸೋಲಾರ್ ಪಂಪ್ ಅಳವಡಿಕೆಗೆ ಬೇಡಿಕೆ ಇದ್ದು, ಈ ಬಗ್ಗೆ ಪರಿಶೀಲಿಸಲಾಗುತ್ತಿದೆ ಎಂದರು.

2019 ರಲ್ಲಿ ಪಿಎಂ ಕುಸುಮ್ ಯೋಜನೆ ಪ್ರಾರಂಭಿಸಿದ್ದು, ಸ್ವತಂತ್ರ ಸೋಲಾರ್ ಪಂಪ್‌ಗಳ ಸ್ಥಾಪನೆಗೆ ರೈತರಿಗೆ ಹಣಕಾಸಿನ ನೆರವು ಕೂಡ ನೀಡಲಾಗಿದೆ. ರೈತರಿಗೆ ಇದು ಆಶಾದಾಯಕವಾಗಿದೆ. ಇನ್ನು, ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜ್ಲಿ ಯೋಜನೆಗೆ ಜನರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಕಳೆದ ಜುಲೈವರೆಗೆ 1.30 ಕೋಟಿಗೂ ಹೆಚ್ಚು ಜನರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ದೇಶ ಅಭಿವೃದ್ಧಿ ಪಥದಲ್ಲಿ ಸಾಗಲು ಶಿಕ್ಷಣ ಪ್ರಮುಖ ಅಸ್ತ್ರವಾಗಿದ್ದು, ಭಾರತ ವಿಶ್ವಗುರುವಾಗಲು, ನುರಿತ ಮಾನವ ಸಂಪನ್ಮೂಲವನ್ನು ತರಬೇತುಗೊಳಿಸುವ ಅಗತ್ಯವಿದೆ ಎಂದು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ.

ತುಮಕೂರು ವಿಶ್ವವಿದ್ಯಾಲಯದ 17ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಒನ್ ಇಂಡಿಯಾ, ಬೆಸ್ಟ್ ಇಂಡಿಯಾ ಮತ್ತು ಡೆವಲಪ್ಡ್ ಇಂಡಿಯಾಗಾಗಿ, ಮೇಡ್ ಇನ್ ಇಂಡಿಯಾ ಮತ್ತು ಮೇಕ್ ಇನ್ ಇಂಡಿಯಾ ಗುರಿಯನ್ನು ಸಾಧಿಸುವಲ್ಲಿ, ಯುವ ಜನತೆ ಕೊಡುಗೆ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಎಂ.ಸಿ.ಸುಧಾಕರ್, ಇಸ್ರೋ ಮಾಜಿ ಅಧ್ಯಕ್ಷ ಡಾಕ್ಟರ್ ಎ.ಎಸ್.ಕಿರಣ್‌ಕುಮಾರ್, ಕುಲಪತಿ ಪ್ರೊಫೆಸರ್ ವೆಂಕಟೇಶ್ವರಲು ಪಾಲ್ಗೊಂಡಿದ್ದರು.

*******

ರಾಷ್ಟ್ರೀಯ ಕೈಮಗ್ಗ ದಿನವನ್ನು ನಿನ್ನೆ ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯಾದ್ಯಂತ ವಿಶೇಷ ಕಾರ್ಯಕ್ರಮಗಳು ಜರುಗಿದ ವರದಿಗಳು ಬಂದಿವೆ.

ಸ್ವದೇಶಿ ಚಳವಳಿಯ ದಿನದ ಸ್ಮರಣಾರ್ಥ ಮತ್ತು ದೇಶೀಯ ಕೈಗಾರಿಕೆಗಳು, ವಿಶೇ ’ವಾಗಿ ಕೈಮಗ್ಗ ನೇಕಾರರನ್ನು ಉತ್ತೇಜಿಸಲು, ಪ್ರತಿ ವ ’ೕ ಆಗಸ್ಟ್ 7 ರಂದು ರಾಷ್ಟ್ರೀಯ ಕೈಮಗ್ಗ ದಿನವನ್ನು ಆಚರಿಸಲಾಗುತ್ತದೆ.

ರಾಷ್ಟ್ರೀಯ ಕೈಮಗ್ಗ ದಿನದ ಅಂಗವಾಗಿ, ದಿಲ್ಲಿಯ ವಿಜ್ಞಾನ ಭವನದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ, ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಕೇಂದ್ರ ಜವಳಿ ಖಾತೆ ಸಚಿವ ಗಿರಿರಾಜ್ ಸಿಂಗ್, ಜವಳಿ ಖಾತೆ ರಾಜ್ಯ ಸಚಿವರಾದ ಪವಿತ್ರಾ ಮಾರ್ಗರಿಟಾ ಪಾಲ್ಗೊಂಡಿದ್ದರು.

ಕೈಮಗ್ಗ ವಲಯದಲ್ಲಿ ಗಣನೀಯ ಸೇವೆ ಸಲ್ಲಿಸಿರುವ ನೇಕಾರರಿಗೆ, ಸಂತ ಕಬೀರ್ ಪ್ರಶಸ್ತಿ ಮತ್ತು ರಾಷ್ಟ್ರೀಯ ಕೈ ಮಗ್ಗ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು.

*******

ಕೈಮಗ್ಗ ನೇಕಾರರನ್ನು ಪ್ರೋತ್ಸಾಹಿಸಲು ಸರ್ಕಾರ ಪ್ರಸಕ್ತ ಸಾಲಿನಲ್ಲಿ 81 ಕೋಟಿ ರೂಪಾಯಿಗಳನ್ನು ವಿನಿಯೋಗಿಸಲಿದೆ ಎಂದು ಜವಳಿ ಖಾತೆ ಸಚಿವ ಶಿವಾನಂದ. ಪಾಟೀಲ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ 10ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಹಾಗೂ ರಾಜ್ಯ ಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ, ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಿ, ಮಾತನಾಡಿದ ಅವರು, ವಿದ್ಯುತ್ ಮಗ್ಗ ನಡೆಸುವ ನೇಕಾರರಿಗೆ ಉಚಿತ ವಿದ್ಯುತ್, ನೇಕಾರರ ಮಕ್ಕಳ ವಿದ್ಯಾಭ್ಯಾಸಕ್ಕೆ ಒತ್ತು, ಶೇಕಡ 1 ರಿಂದ 3 ರ ಬಡ್ಡಿ ದರದಲ್ಲಿ, ಸಾಲ ಸೌಲಭ್ಯ ಸೇರಿದಂತೆ, ಹಲವು ಸೌಲಭ್ಯಗಳನ್ನು ಸರ್ಕಾರ ನೀಡುತ್ತಿದೆ. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಿಗೆ ನೇಕಾರರು ಉತ್ಪಾದಿಸುವ ಬಟ್ಟೆಗಳನ್ನು ಖರೀದಿಸಿದರೆ ಅವರಿಗೂ ಅನುಕೂಲವಾಗಲಿದೆ ಎಂದರು.

ಜವಳಿ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ಬೆಂಗಳೂರು ನಗರ ಜಿಲ್ಲೆಯ ಆರ್. ಮಂಜುನಾಥ್, ಚಿಕ್ಕಬಳ್ಳಾಪುರ ಜಿಲ್ಲೆಯ ರಮೇಶ್, ಬಳ್ಳಾರಿಯ ಹನುಮಂತಮ್ಮ ಬಾಣದ ಮತ್ತು ತಿಪ್ಪೇಸ್ವಾಮಿ. ದಾವಣಗೆರೆಯ ತುಕಾರಾಮ ವಡ್ಡಿ ಅವರಿಗೆ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

*******

ಕೈಮಗ್ಗ ತಂತ್ರಜ್ಞಾನ ಸಂಸ್ಥೆ ಬೆಟಗೇರಿಯಲ್ಲಿ ಸ್ಥಾಪನೆಯಾಗಲು ಇಲ್ಲಿನ ಸ್ಥಳೀಯ ನೇಕಾರರು ಮೂಲ ಕಾರಣ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದ್ದಾರೆ.

ಗದಗ ಜಿಲ್ಲೆ ನರಸಾಪೂರದಲ್ಲಿರುವ, ಕರ್ನಾಟಕ ಕೈ ಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ, 10ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಅಂದಿನ ಕೇಂದ್ರ ಸರ್ಕಾರ, ರಾಷ್ಟ್ರದ ಅತ್ಯುತ್ತಮ ಜವಳಿ ನೀತಿ ರೂಪಿಸಿ, ಕೈ ಮಗ್ಗ ತಂತ್ರಜ್ಞಾನ ಸಂಸ್ಥೆಯನ್ನು ಪ್ರಾರಂಭಿಸಲು ನಿರ್ಧರಿಸಿತು. ಪ್ರತಿಫಲವಾಗಿ ರಾಜ್ಯದಲ್ಲಿಯೇ ಪ್ರಥಮ ಕೈಮಗ್ಗ ಸಂಸ್ಥೆ, ಗದಗ ಜಿಲ್ಲೆಯಲ್ಲಿ ಸ್ಥಾಪನೆಯಾಯಿತು ಎಂದು ಸಚಿವರು ಹೇಳಿದರು.

*******

ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ವಿಗ್ರಹಗಳ ಮಾರಾಟ ಮತ್ತು ಪ್ರತಿಷ್ಠಾಪನೆ ನಿಷೇಧಿಸಲಾಗಿದೆ ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

ಮೂರ್ತಿ ತಯಾರಕರು ಸರ್ಕಾರದ ಆದೇಶ ಉಲ್ಲಂಘಿಸಿ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ಗಣೇಶ ಮೂರ್ತಿಗಳನ್ನು ತಯಾರಿಸಿರುವುದು ಕಂಡು ಬಂದಲ್ಲಿ ಮೂರ್ತಿಗಳನ್ನು ವಶಪಡಿಸಿಕೊಂಡು ಸ್ಥಳದಲ್ಲಿಯೇ 10 ಸಾವಿರ ರೂಪಾಯಿ ದಂಡ ವಿಧಿಸಲಾಗುವುದು ಎಂದು ತಿಳಿಸಿದ್ದಾರೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಪ್ರಸಿದ್ಧ ಜೀವರಸಾಯನ ವಿಜ್ಞಾನಿ, ಐಐಎಸ್‌ಸಿ ಬೆಂಗಳೂರಿನ ಮಾಜಿ ನಿರ್ದೇಶಕ ಗೋವಿಂದರಾಜನ್ ಪದ್ಮನಾಭನ್ ಅವರನ್ನು ಕೇಂದ್ರ ಸರ್ಕಾರ ಚೊಚ್ಚಲ ‘ವಿಜ್ಞಾನ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ಸಂವಿಧಾನ ಶಿಲ್ಪಿ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ವಿ ’ಯ ಆಧಾರಿತ ಸ್ವಾತಂತ್ರ್ಯೋತ್ಸವ ಫಲಪು ್ಪ ಪ್ರದರ್ಶನವು ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಇಂದಿನಿಂದ 19 ರವರೆಗೆ ನಡೆಯಲಿದೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

‘ಬ್ರಿಟಿಷರೇ ಭಾರತ ಬಿಟ್ಟು ತೊಲಗಿ’–ಕ್ವಿಟ್ ಇಂಡಿಯಾ ಆಂದೋಲನದ, 82ನೇ ವರ್ಷಾಚರಣೆ, ಇಂದು.

ರಾಜ್ಯದ ಜನಸಾಮಾನ್ಯರ ಹಿತಕಾಯುವಲ್ಲಿ ಸರ್ಕಾರ ಬದ್ಧತೆ ತೋರಿದೆ– ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ.

ದೇಶ ಅಭಿವೃದ್ಧಿ ಪಥದಲ್ಲಿ ಸಾಗಲು ಶಿಕ್ಷಣ ಪ್ರಮುಖ ಅಸ್ತ್ರ–ರಾಜ್ಯಪಾಲ ಥಾವರಚಂದ ಗೆಹ್ಲೋಟ್

ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ನಿನ್ನೆ ರಾಜ್ಯಾದ್ಯಂತ ರಾಷ್ಟ್ರೀಯ ಕೈಮಗ್ಗ ದಿನ ಆಚರಣೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 9 ಗಂಟೆ 5 ನಿಮಿಷಕ್ಕೆ

******